## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ರಾಜ್ಯದಲ್ಲಿ ಪ್ರಸ್ತುತ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಶಾಲೆಗಳಲ್ಲಿ 1 ರಿಂದ 5ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಜಾರಿಯಲ್ಲಿರುವ ಅಕ್ಷರ ದಾಸೋಹ ಮಧ್ಯಾಹ್ನ ಬಿಸಿ ಊಟ ಯೋಜನೆಯನ್ನು 6 ಮತ್ತು 7ನೇ ತರಗತಿಗಳಿಗೂ ವಿಸ್ತರಿಸುವ ಬಗ್ಗೆ.

ಓದಲಾಗಿದೆ: 1) ಸನ್ಮಾನ್ಯ ಉಪ ಮುಖ್ಯ ಮಂತ್ರಿಯವರು ದಿ: 19-7-2004ರಂದು ವಿಧಾನ ಮಂಡಲದಲ್ಲಿ ಮಂಡಿಸಿದ 2004-05ನೇ ಸಾಲಿನ ಆಯವ್ಯಯ ಭಾಷಣ.

2) ದಿ: 24-8-2004ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿ,ಆರ್ಥಿಕ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ 2004-05ನೇ ಸಾಲಿನ ಯೋಜನಾ ಕಾರ್ಯಕ್ರಮಗಳಡಿಯ ಹೊಸ ಘಟಕಗಳ ಅನುಷ್ಠಾನಕ್ಕೆ ಮಂಜೂರಾತಿ ನೀಡುವ ಸಮಿತಿ ಸಭೆಯ ನಡವಳಿಗಳು.

3) ಆದೇಶ ಸಂಖ್ಯೆ: ಇಡಿ 46 ಎಂಎಂಎಸ್ 2004, ದಿ:1-9-2004 (ಇಡಿ 41 ಸ್ಕೀಮರ (ಯೂನಿಕ್) 2004, ದಿನಾಂಕ: 1-9-2004)

**ಪ್ರಸ್ತಾವನೆ:**

ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಂದರಿಂದ ಐದನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಜಾರಿಯಲ್ಲಿದ್ದ ಮಧ್ಯಾಹ್ನದ ಬಿಸಿ ಊಟ ಒದಗಿಸುವ ಅಕ್ಷರ ದಾಸೋಹ ಕಾರ್ಯಕ್ರಮವನ್ನು ಮೇಲೆ (3)ರಲ್ಲಿ ಓದಲಾದ ದಿನಾಂಕ: 1-9-2004ರ ಸರ್ಕಾರಿ ಆದೇಶದಲ್ಲಿ ಖಾಸಗಿ ಅನುದಾನಿತ ಶಾಲೆಗಳಲ್ಲಿನ ಮಕ್ಕಳಿಗೂ ವಿಸ್ತರಿಸಲಾಯಿತು. ಈ ಯೋಜನೆಯನ್ನು ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಶಾಲೆಗಳಲ್ಲಿನ 6 ಮತ್ತು 7ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೂ ವಿಸ್ತರಿಸಲು ತೀರ್ಮಾನಿಸಿದ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 46 ಎಂಎಂಎಸ್ 2004, ಬೆಂಗಳೂರು ದಿನಾಂಕ: 01-10-2004**
(ಇಡಿ 51 ಸ್ಕೀಮರ (ಯೂನಿಕ್)2004, ದಿನಾಂಕ: 01-10-2004)

ರಾಜ್ಯದಲ್ಲಿ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಶಾಲೆಗಳಲ್ಲಿ 1 ರಿಂದ 5ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಜಾರಿಯಲ್ಲಿರುವ ಮಧ್ಯಾಹ್ನದ ಬಿಸಿ ಊಟ ಒದಗಿಸುವ ಅಕ್ಷರ ದಾಸೋಹ ಕಾರ್ಯಕ್ರಮವನ್ನು ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಶಾಲೆಗಳಲ್ಲಿ 6 ಮತ್ತು 7ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೂ ತಕ್ಷಣದಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲು ಸರ್ಕಾರವು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರಿಗೆ ಈ ಮೂಲಕ ಅನುಮೋದನೆ ನೀಡುತ್ತದೆ.

ಒಂದರಿಂದ ಐದನೇ ತರಗತಿಯವರೆಗೆ ಪ್ರತಿ ವಿದ್ಯಾರ್ಥಿಗೆ ಜಾರಿಯಲ್ಲಿರುವ ಪರಿವರ್ತನಾ ವೆಚ್ಚ ರೂ.1.31 ನ್ನು 6 ಮತ್ತು 7ನೇ ತರಗತಿಯ ವಿದ್ಯಾರ್ಥಿಗಳಿಗೂ ವಿಸ್ತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ. ಖಾಸಗಿ ಅನುದಾನಿತ ಶಾಲೆಗಳಿಗೆ ಅಕ್ಕಿ, ಸಾಗಾಣಿಕೆ ವೆಚ್ಚ, ಪರಿವರ್ತನಾ ವೆಚ್ಚ ಹಾಗೂ ಸಪ್ಲಿಮೆಂಟರಿ ಪೌಷ್ಟಿಕ ವೆಚ್ಚಗಳನ್ನು ಸರ್ಕಾರದ ವತಿಯಿಂದ ಭರಿಸಲು ಈ ಮೂಲಕ ಅನುಮೋದನೆ ನೀಡಲಾಗಿದೆ.

ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ವಿದ್ಯಾರ್ಥಿಗಳಿಂದಾಗಲೀ, ಅವರ ಪೋಷಕರಿಂದಾಗಲೀ ಯಾವುದೇ ಹಣ ಸಂಗ್ರಹಿಸುವುದನ್ನು ನಿಷೇಧಿಸಿದೆ.

ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ಅಕ್ಕಿ/ಗೋಧಿ,ಬೇಳೆ, ಎಣ್ಣೆ, ಉಪ್ಪು ಇತ್ಯಾದಿಗಳನ್ನು ಬಿ.ಪಿ.ಎಲ್. ದರಗಳಲ್ಲಿ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದ ಮೂಲಕ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಸರಬರಾಜು ಮಾಡುವುದು, ಒಂದು ವೇಳೆ ಇದು ಸಾಧ್ಯವಾಗದಿದ್ದ ಪಕ್ಷದಲ್ಲಿ ಅಕ್ಕಿ/ಗೋಧಿಗಳನ್ನು ಸಾರ್ವಜನಿಕ ಟೆಂಡರ್ ಮೂಲಕ ಸ್ಪರ್ಧಾತ್ಮಕ ದರಗಳನ್ನು ಆಹ್ವಾನಿಸಿ ಖರೀದಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಕ್ರಮ ಕೈ ಗೊಳ್ಳತಕ್ಕದ್ದು.

ಈ ಕಾರ್ಯಕ್ರಮದ ಸಮರ್ಪಕ ಮತ್ತು ಸಕಾಲಿಕ ಅನುಷ್ಠಾನದ ಬಗ್ಗೆ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು,ಬೆಂಗಳೂರು ಅವರು ಕೂಡಲೇ ಮಾರ್ಗದರ್ಶಿ ಸುತ್ತೋಲೆಗಳನ್ನು ಹೊರಡಿಸತಕ್ಕದ್ದು.

ಉಳಿದಂತೆ ಸರ್ಕಾರಿ ಆದೇಶ ಕ್ರಮಾಂಕ: ಇಡಿ 46 ಎಂಎಂಎಸ್ 2004, ದಿನಾಂಕ: 01-9-2004ರಲ್ಲಿ ನೀಡಿದ ಸೂಚನೆಗಳೇ ಇಲ್ಲಿಗೂ ಅನ್ವಯಿಸುತ್ತವೆ. ಈ ವೆಚ್ಚವನ್ನು ಆಯವ್ಯಯ ಲೆಕ್ಕಶೀರ್ಷಿಕೆ 2202-01-800-1-35-059 ರಡಿಯಲ್ಲಿ 2004-05ನೇ ಸಾಲಿಗೆ ನಿಗದಿಯಾಗಿರುವ ಆಯವ್ಯಯದ ಮಿತಿಯಲ್ಲೇ ಭರಿಸತಕ್ಕದ್ದು.

ಈ ಆದೇಶವನ್ನು ಮುಂದುವರಿಕೆ ಕಾರ್ಯಕ್ರಮಗಳಡಿಯ ಹೊಸಘಟಕಗಳ ಅನುಷ್ಠಾನ ಮಂಜೂರಾತಿ ಸಮಿತಿಯ ಸಭೆಯ ನಡವಳಿಗಳಿಗೆ ಯೋಜನೆ ಮತ್ತು ಆರ್ಥಿಕ ಇಲಾಖೆಗಳು ಕ್ರಮವಾಗಿ ತಮ್ಮ ಅ.ಟಿ.ಸಂಖ್ಯೆ: ಯೋಇ 772 ಜಿಪ 2004, ದಿನಾಂಕ: 25-8-2004 ಮತ್ತು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ , ಆರ್ಥಿಕ ಇಲಾಖೆ ಅವರ ಸಂಖ್ಯೆ: 3917 ದಿನಾಂಕ: 28-8-2004 ಹಾಗೂ ಆರ್ಥಿಕ ಇಲಾಖೆಯ ಅ.ಟಿ.ಸಂಖ್ಯೆ: ಆಇ 662 ವೆಚ್ಚ-8/2004, ದಿನಾಂಕ: 20-8-2004ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ಶ್ರೀಕಂಠೇಶ್ವರ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ (ಯೋಜನೆ),
ಶಿಕ್ಷಣ ಇಲಾಖೆ.

ಇವರಿಗೆ

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ,ಬೆಂಗಳೂರು
3) ನಿರ್ದೇಶಕರು (ಪ್ರಾಥಮಿಕ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
4) ಜಂಟಿ ನಿರ್ದೇಶಕರು, (ಮ. ಉ. ಯೋ), ಆಯುಕ್ತರ ಕಛೇರಿ, ಬೆಂಗಳೂರು
5) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
6) ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
7) ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು
8) ಎಲ್ಲಾ ಜಿಲ್ಲೆಯ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ
9) ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ,ಬೆಂಗಳೂರು
10) ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು
11) ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
12) ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
13) ಉಪ ಕಾರ್ಯದರ್ಶಿಗಳು, ಸಚಿವ ಸಂಪುಟ ವ್ಯವಹಾರಗಳ ಇಲಾಖೆ, ವಿಧಾನ ಸೌಧ, ಬೆಂಗಳೂರು
14) ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
15) ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ )ರವರ ಆಪ್ತ ಕಾರ್ಯದರ್ಶಿ
16) ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-8, ವಿಧಾನ ಸೌಧ,ಬೆಂಗಳೂರು
17) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು